ದೌರ್ಜನ್ಯ ಪ್ರಕರಣಗಳು

494(297); ಶ್ರೀ ಗೋವಿಂದ ಎಂ. ಕಾರಜೋಳ (ಮುಧೋಳ)

ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ/ಪಂಗಡಗಳ ಜನಾಂಗದವರ ಮೇಲೆ ಆಗುತ್ತಿರುವ ದೌರ್ಜನ್ಯ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಪರಿಶಿಷ್ಟ ಜಾತಿ/ಪಂಗಡಗಳ ಜನಾಂಗದವರ ಮೇಲೆ ಎಸಗಿರುವ ಎಷ್ಟು ದೌರ್ಜನ್ಯ ಪ್ರಕರಣಗಳು ಇದುವರೆವಿಗೂ ದಾಖಲಾಗಿವೆ. ಮತ್ತು ಶಿಕ್ಷೆಗೆ ಗುರಿಯಾದವರ ಸಂಖ್ಯೆ ಎಷ್ಟು; ಕೈಬಿಡಲಾದ ಪ್ರಕರಣಗಳೆಷ್ಟು;

ಇ) ರಾಜ್ಯದಲ್ಲಿ ಪರಿಶಿಷ್ಟ ಜಾತಿ/ಪಂಗಡಗಳ ಜನಾಂಗದವರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ತಡೆಯುವಲ್ಲಿ ಇದುವರೆವಿಗೂ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹೌದು

ಆ)

	2010	2011	2012
ದಾಖಲಾದ ಪ್ರಕರಣಗಳ ಸಂಖ್ಯೆ	1633	1792	1762
ಶಿಕ್ಷೆಗೆ ಗುರಿಯಾದವರ ಸಂಖ್ಯೆ	27	26	06
ಕೈಬಿಡಲಾದ ಪ್ರಕರಣಗಳ ಸಂಖ್ಯೆ	384	360	275

ಇ) ರಾಜ್ಯದಲ್ಲಿ ದೌರ್ಜನ್ಯ ಪ್ರಕರಣಗಳು ತಡೆಯುವ ಕುರಿತು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ನಾಗರೀಕ ಹಕ್ಕುಗಳ ಜಾರಿ ನಿರ್ದೇಶನಾಲಯ ಸ್ಥಾಪಿಸಿ, ಹೆಚ್ಚುವರಿ ಪೋಲಿಸ್ ಮಹಾನಿರ್ದೇಶಕರ ನೇತೃತ್ವದಲ್ಲಿ ನಿರ್ವಹಿಸಲಾಗುತ್ತಿದೆ.
2. ಪ.ಜಾತಿ ಮತ್ತು ಪಂಗಡಗಳ ದೌರ್ಜನ್ಯ ನಿಯಂತ್ರಣ ತಡೆ ಕಾಯಿದೆ 1989 ಜಾರಿಗೊಳಿಸಿದ್ದು, ಈ ಕಾಯಿದೆಯಡಿ ದೌರ್ಜನ್ಯ ಎಸಗುವವರ ಮೇಲೆ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲು ಮಾಡಲಾಗುತ್ತದೆ.
3. ರಾಜ್ಯದಲ್ಲಿ ದೌರ್ಜನ್ಯ ಪ್ರಕರಣಗಳ ವಿಚಾರಣೆಗಳನ್ನು ತ್ವರಿತವಾಗಿ ಮಾಡಿ ಇತ್ಯರ್ಥಗೊಳಿಸಲು 7 ವಿಶೇಷ ನ್ಯಾಯಾಲಗಳನ್ನು ಸ್ಥಾಪಿಸಲಾಗಿದೆ.
4. ದೌರ್ಜನ್ಯ ಪ್ರಕರಣಗಳ ಬಗ್ಗೆ ರಾಜ್ಯ ಮಟ್ಟದ ಜಾಗೃತಿ ಸಮಿತಿಯಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ 06 ತಿಂಗಳಿಗೊಮ್ಮೆ ಪರಿಶೀಲನೆಯ ಮಾಡಲಾಗುತ್ತಿದೆ. ಹಾಗೂ ಪ್ರತಿ ಜಿಲ್ಲೆಗಳಲ್ಲಿ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಸಭೆಯನ್ನು ಪ್ರತಿ 03 ತಿಂಗಳಿಗೊಮ್ಮೆ ಸಭೆ ನಡೆಸಿ ಪರಿಶೀಲನೆ ನಡೆಸಲಾಗುತ್ತಿದೆ.
5. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವರಷ್ಠಾಧಿಕಾರಿಗಳು, ಆಗಿಂದಾಗ್ಗೆ ದೌರ್ಜನ್ಯ ಪ್ರಕರಣಗಳ ಬಗ್ಗೆ ಎಚ್ಚರಿಕೆ ವಹಿಸಿ ಉಸ್ತುವಾರಿ ಮಾಡಲಾಗುತ್ತಿದೆ
6. ಎಲ್ಲಾ ಪೋಲಿಸ್ ಅಧಿಕಾರಿಗಳಿಗೆ ದೌರ್ಜನ್ಯ ಪ್ರಕರಣಗಳ ಬಗ್ಗೆ ತಕ್ಷಣ ಕ್ರಮ ಜರುಗಿಸಲು ಸೂಚನೆ ನೀಡಲಾಗಿದೆ